**All India Radio: Bangalore**
**Regional Bulletin In Kannada**
**16.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**16.02.2026 / 2.30 p.m.**

**<><><><>**

ಮುಖ್ಯಾಂಶಗಳು

1. ಬೆಂಗಳೂರಿನ ಗ್ಯಾಸ್ ಟರ್ಬೈನ್ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
2. ಕೋಲಾರದ ವೇಮಗಲ್‌ನಲ್ಲಿ ದೇಶದ ಮೊದಲ ಮಿನಿ ಹೆಲಿಕಾಪ್ಟರ್ ಘಟಕಕ್ಕೆ ನಾಳೆ ಚಾಲನೆ
3. ವಿವಿಧ ಸಂಘಸಂಸ್ಥೆಗಳು, ಪರಿಶಿಷ್ಟ ಜಾತಿಯ ಶಾಸಕರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬಜೆಟ್ ಪೂರ್ವಭಾವಿ ಸಭೆ
4. ದಾವಣಗೆರೆ, ಹಾವೇರಿ, ಮಂಡ್ಯ ಸೇರಿದಂತೆ ವಿವಿಧ ನ್ಯಾಯಾಲಯಗಳಿಗೆ ಹುಸಿ ಬಾಂಬ್ ಬೆದರಿಕೆ ; ಪೊಲೀಸರಿಂದ ಪರಿಶೀಲನೆ
5. ರಣಜಿ ಟ್ರೋಫಿ ಸೆಮಿಫೈನಲ್ ಪಂದ್ಯ : ಉತ್ತರಾಖಂಡ್ ವಿರುದ್ಧ ದೇವದತ್ ಪಡಿಕ್ಕಲ್ ಚೊಚ್ಚಲ ದ್ವಿಶತಕ

<><><><>

ಬೆಂಗಳೂರಿನ ವಿವಿಧ ಕಾರ್ಯಕ್ರಮಗಳು ಹಾಗೂ ಸಭೆಗಳಲ್ಲಿ ಭಾಗವಹಿಸಲು ಎರಡು ದಿನಗಳ ಬೆಂಗಳೂರು ಪ್ರವಾಸ ಕೈಗೊಂಡಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇಂದು ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಆಗಮಿಸಿದ್ದಾರೆ. ಇಂದು ಅವರು, ರಕ್ಷಣಾ ವಲಯದ ವಿವಿಧ ಸಂಸ್ಥೆಗಳಿಗೆ ಭೇಟಿ ನೀಡಲಿದ್ದಾರೆ. ಮೊದಲಿಗೆ ಬೆಂಗಳೂರಿನ ಗ್ಯಾಸ್ ಟರ್ಬೈನ್ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿದ ಬಳಿಕ ಮಾತನಾಡಿದ ಅವರು, ವಿಶ್ವವೇ ಇಂದು ಭಾರತದ ಅಭಿವೃದ್ಧಿಯನ್ನು ಬೆರಗುಗಣ್ಣಿನಿಂದ ನೋಡುತ್ತಿದೆ ಎಂದು ತಿಳಿಸಿದ್ದಾರೆ. ವಿಶ್ವ ನಾಯಕನಾಗುವಲ್ಲಿ ಭಾರತ ಮುನ್ನುಗ್ಗುತ್ತಿದ್ದು, ಯೂರೋಪಿಯನ್ ಒಕ್ಕೂಟದೊಂದಿಗಿನ ವಾಣಿಜ್ಯ ಒಪ್ಪಂದವನ್ನು ಅವರು ಸಮರ್ಥಿಸಿಕೊಂಡಿದ್ದಾರೆ. ಇದೇ ವೇಳೆ ಬ್ರಿಟನ್‌ನೊಂದಿಗೆ ಏರೋ ಇಂಜಿನ್ ಕುರಿತು ಜಂಟಿ ಸಂಶೋಧನೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

## ಧ್ವನಿ : ರಾಜನಾಥ್ ಸಿಂಗ್

ನಾಳೆ ರಾಜನಾಥ್ ಸಿಂಗ್ ಅವರು, ಫ್ರಾನ್ಸ್ ರಕ್ಷಣಾ ಸಚಿವ ಕ್ಯಾಥರಿನ್ ವೌಟ್ರಿನ್ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಳ್ಳಲಿದ್ದಾರೆ. ನಂತರ ಉಭಯ ನಾಯಕರು ೬ನೇ ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಈ ಸಭೆ, ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರದ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದೆ. ಕೈಗಾರಿಕಾ ಸಹಯೋಗವನ್ನು ವಿಸ್ತರಿಸುವತ್ತ ಗಮನ ಹರಿಸಲಿದ್ದು, ರಕ್ಷಣಾ ಸಹಕಾರ ಒಪ್ಪಂದವನ್ನು ಮುಂದಿನ ೧೦ ವರ್ಷಗಳ ಕಾಲ ನವೀಕರಿಸುವ ನಿರೀಕ್ಷೆಯಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><>

ಕೋಲಾರ ತಾಲೂಕಿನ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನಿಂದ ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್‌ನ ಅಂತಿಮ ಜೋಡಣಾ ಘಟಕ ಸ್ಥಾಪನೆಯಾಗುತ್ತಿದೆ. ಟಾಟಾ ಏರ್‌ಬಸ್‌ನ ಹೆಚ್-೧೨೫ ಲಘು ಹೆಲಿಕಾಪ್ಟರ್ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಈ ವೇಳೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಪಸ್ಥಿತರಿರಲಿದ್ದಾರೆ. ಹೆಲಿಕಾಪ್ಟರ್ ಘಟಕ ಪಡೆದುಕೊಳ್ಳಲು ಉತ್ತರ ಪ್ರದೇಶ, ಆಂಧ್ರ ಪ್ರದೇಶ, ಗುಜರಾತ್ ರಾಜ್ಯಗಳು ತೀವ್ರ ಪೈಪೋಟಿ ನಡೆಸಿದ್ದವು. ಈ ಎಲ್ಲ ರಾಜ್ಯಗಳ ಪ್ರಯತ್ನವನ್ನು ಹಿಂದಿಕ್ಕುವ ಮೂಲಕ ರಾಜ್ಯ ಯೋಜನೆಯನ್ನು ತನ್ನದಾಗಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಏರೋಸ್ಪೇಸ್ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಕರ್ನಾಟಕ ಶೇಕಡ ೬೫ ಕೊಡುಗೆಯೊಂದಿಗೆ ದೇಶದಲ್ಲಿ ಮೊದಲ ಸ್ಥಾನದಲ್ಲಿದೆ. ಆರಂಭದಲ್ಲಿ ವಾರ್ಷಿಕ ೧೦ ಹೆಲಿಕಾಪ್ಟರ್ ಉತ್ಪಾದಿಸುವ ಗುರಿ ಹೊಂದಲಾಗಿದೆ. ಮುಂದಿನ ವರ್ಷಗಳಲ್ಲಿ ೫೦೦ ಲಘು ಹೆಲಿಕಾಪ್ಟರ್ ತಯಾರಿಕೆಗೆ ಬೇಡಿಕೆ ಬರಬಹುದು ಎಂದು ಏರ್‌ಬಸ್ ಅಂದಾಜಿಸಿದೆ. ಇದೇ ಮೊದಲ ಬಾರಿಗೆ ಕೋಲಾರದಲ್ಲಿ ಖಾಸಗಿ ಹೆಲಿಕಾಪ್ಟರ್ ಅಸೆಂಬ್ಲಿ ಘಟಕ ಆರಂಭವಾಗಿರುವುದು ಆತ್ಮ ನಿರ್ಭರ ಭಾರತಕ್ಕೆ ಮತ್ತಷ್ಟು ಶಕ್ತಿ ತುಂಬಲಿದೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ೨೦೨೬-೨೭ನೇ ಸಾಲಿನ ಆಯ-ವ್ಯಯ ಕುರಿತಂತೆ ಪೂರ್ವಭಾವಿ ಸಭೆ ನಡೆಸಲಿದ್ದಾರೆ. ವಾಣಿಜ್ಯ ಸಂಘ ಸಂಸ್ಥೆಗಳು, ಸಾರಿಗೆ ಸಂಘ ಸಂಸ್ಥೆಗಳು, ಅಬಕಾರಿ ಸಂಘಸಂಸ್ಥೆಗಳು ಹಾಗೂ ಭೂ ಮಾರುಕಟ್ಟೆ ಸಂಘ ಸಂಸ್ಥೆಗಳೊಂದಿಗೆ ಸಮಾಲೋಚನೆ

ನಡೆಸಲಿದ್ದಾರೆ. ಸಂಜೆ ಅವರು, ಆಡಳಿತ ಪಕ್ಷದ ಪರಿಶಿಷ್ಟ ಜಾತಿಯ ಶಾಸಕರೊಂದಿಗೆ ಬಜೆಟ್ ಪೂರ್ವಭಾವಿ ಚರ್ಚೆ ನಡೆಸಲಿದ್ದಾರೆ.

<><><><>

ದಾವಣಗೆರೆಯ ದೇವರಾಜ ಅರಸ್ ಬಡಾವಣೆಯಲ್ಲಿರುವ ಜಿಲ್ಲಾ ನ್ಯಾಯಾಲಯ ಸಂಕೀರ್ಣಕ್ಕೆ ಇಂದು ಮಧ್ಯಾಹ್ನ ಬಾಂಬ್ ಬೆದರಿಕೆ ಇ-ಮೇಲ್ ಬಂದಿದ್ದು, ವಕೀಲರು, ಸಿಬ್ಬಂದಿ ಹಾಗೂ ಸಾರ್ವಜನಿಕರಲ್ಲಿ ಕೆಲಕಾಲ ಆತಂಕ ಸೃಷ್ಟಿಯಾಗಿತ್ತು. ನ್ಯಾಯಾಲಯದ ಅಧಿಕೃತ ಇ-ಮೇಲ್ ವಿಳಾಸಕ್ಕೆ ಕಿಡಿಗೇಡಿಗಳು ಬಾಂಬ್ ಬೆದರಿಕೆ ಸಂದೇಶ ಕಳುಹಿಸಿದ್ದರು. ವಿಷಯ ತಿಳಿಯುತ್ತಿದ್ದಂತೆ ಎಚ್ಚೆತ್ತುಕೊಂಡ ಪೊಲೀಸರು, ನ್ಯಾಯಾಲಯದ ಆವರಣದಲ್ಲಿದ್ದವರನ್ನು ಹೊರಗೆ ಕಳುಹಿಸಿ ಇಡೀ ಕಟ್ಟಡವನ್ನು ವಶಕ್ಕೆ ಪಡೆದರು. ಸ್ಥಳಕ್ಕೆ ಧಾವಿಸಿದ ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನ ದಳದ ಸಿಬ್ಬಂದಿ ನ್ಯಾಯಾಲಯದ ಪ್ರತಿ ಕೊಠಡಿ, ಆವರಣ ಸಮೀಪದ ರಸ್ತೆಗಳಲ್ಲಿ ತೀವ್ರ ಶೋಧ ನಡೆಸಿದರು. ಸುಮಾರು ಎರಡು ಗಂಟೆಗಳ ಕಾಲ ನಡೆದ ಸುದೀರ್ಘ ಕಾರ್ಯಾಚರಣೆಯ ನಂತರ ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗದ ಕಾರಣ, ಇದೊಂದು ಹುಸಿ ಬೆದರಿಕೆ ಎಂದು ಪೊಲೀಸರು ಖಚಿತಪಡಿಸಿದರು. ಪ್ರಾಥಮಿಕ ತನಿಖೆಯ ಪ್ರಕಾರ, ಈ ಬೆದರಿಕೆ ಸಂದೇಶವು ತಮಿಳುನಾಡಿನಿಂದ ಬಂದಿದೆ ಎಂದು ಗುರುತಿಸಲಾಗಿದೆ. ಸೈಬರ್ ಪೊಲೀಸರು ಇ-ಮೇಲ್‌ನ ಐಪಿ ವಿಳಾಸದ ಜಾಡು ಹಿಡಿದು ಕಿಡಿಗೇಡಿಗಳ ಪತ್ತೆಗೆ ಮುಂದಾಗಿದ್ದಾರೆ. ಘಟನೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲಾ ನ್ಯಾಯಾಲಯದ ಸುತ್ತಮುತ್ತ ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಪೊಲೀಸ್ ಭದ್ರತೆಯನ್ನು ಹೆಚ್ಚಿಸಲಾಗಿದೆ.

<><><><>

ಇನ್ನೊಂದೆಡೆ ಹಾವೇರಿಯ ಜಿಲ್ಲಾ ನ್ಯಾಯಾಲಯದ ಕಟ್ಟಡದಲ್ಲಿ ಬಾಂಬ್ ಇಡಲಾಗಿದೆ ಎಂಬ ಬೆದರಿಕೆ ಫ್ಯಾಕ್ಸ್ ಬಂದ ಹಿನ್ನಲೆಯಲ್ಲಿ ಬಾಂಬ್ ನಿಷ್ಕ್ರಿಯ ದಳ ಹಾಗೂ ಶ್ವಾನ ದಳ ತಪಾಸಣೆ ನಡೆಸಿತು. ಬಾಂಬ್ ಬೆದರಿಕೆಯ ಹಿನ್ನಲೆಯಲ್ಲಿ ಇಂದಿನ ಎಲ್ಲಾ ಕಲಾಪಗಳನ್ನು ಮೊಟಕುಗೊಳಿಸಿ ವಕೀಲರು ಹಾಗೂ ಸಾರ್ವಜನಿಕರನ್ನು ಕಟ್ಟಡದಿಂದ ಹೊರಕ್ಕೆ ಕಳುಹಿಸಿದ ಪೋಲಿಸ್ ಸಿಬ್ಬಂದಿ ವಾಹನ ನಿಲುಗಡೆ ಸ್ಥಳ ಸೇರಿದಂತೆ ನ್ಯಾಯಾಲಯದ ಆವರಣದಲ್ಲಿ ಪರಿಶೀಲನೆ ನಡೆಸಿದರು.

<><><><>

ಮಂಡ್ಯ ನಗರದಲ್ಲಿರುವ ಜಿಲ್ಲಾ ನ್ಯಾಯಾಲಯಕ್ಕೂ ಹುಸಿ ಬಾಂಬ್ ಕರೆ ಬಂದಿದ್ದು, ಬಾಂಬ್ ಸ್ಕ್ವಾಡ್ ದಳ ಇಡೀ ನ್ಯಾಯಾಲಯವನ್ನು ತಪಾಸಣೆ ನಡೆಸಿದೆ. ನ್ಯಾಯಾಲಯದ ಮೇಲ್ ವಿಳಾಸಕ್ಕೆ ಹುಸಿ ಬಾಂಬ್ ಕರೆ ಬಂದಿದ್ದು, ಕೂಡಲೇ ನ್ಯಾಯಾಲಯದಲ್ಲಿದ್ದ ಜಡ್ಜ್‌ಗಳು, ವಕೀಲರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಕೋರ್ಟ್ ಹಾಲ್ ನಿಂದ ಹೊರಗೆ ಬಂದಿದ್ದಾರೆ. ತಕ್ಷಣ ಬಾಂಬ್ ಸ್ಕ್ವಾಡ್ ತಪಾಸಣೆ ನಡೆಸಿ, ಹುಸಿ ಕರೆ ಎಂಬುದನ್ನು ಸ್ಪಷ್ಟಪಡಿಸಿದ್ದಾರೆ. ಮಧ್ಯಾಹ್ನದ ವೇಳೆಗೆ ಎಂದಿನಂತೆ ಕಲಾಪಗಳು ನಡೆಯಿತು.

<><><><>

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಗುರಿಯಾಗಿಸುವುದು ಇಂದು ಕಾರ್ಯಕರ್ತರನ್ನು ಪ್ರತ್ಯೇಕಿಸುವುದು ಅವರ ಗುಪ್ತ ಕಾರ್ಯಸೂಚಿ ಎಂದು ಆರೋಪಸಿದ್ದಾರೆ. ತಮ್ಮ ವೈಫಲ್ಯ ಮುಚ್ಚಿಹಾಕಲು ಈ ರೀತಿಯ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

<><><><>

ಕಾಡಾನೆ ದಾಳಿಯಿಂದ ಕಾಫಿ ತೋಟದ ಕಾರ್ಮಿಕ ಮೃತ್ತಪಟ್ಟಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಹುಣಸೇಹಳ್ಳಿ - ಪುರ ಗ್ರಾಮದಲ್ಲಿ ನಡೆದಿದೆ. ಹಾವೇರಿ ಮೂಲದ ಯಲ್ಲಪ್ಪ ಎಂಬುವವರು ಸ್ಥಳೀಯ ಕಾಫಿ ತೋಟದಲ್ಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾಗ, ಇಂದು ಬೆಳಗ್ಗೆ ತೋಟದಲ್ಲಿ ಆನೆ ದಾಳಿ ನಡೆಸಿದೆ. ಸ್ಥಳಕ್ಕೆ ಅರಣ್ಯಧಿಕಾರಿಗಳು ಭೇಟಿ ನೀಡಿ ಪರಿಶಿಲನೆ ನಡೆಸಿದ್ದಾರೆ.

<><><><>

ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದನ್ವಯ ವಿಶೇಷ ಪರಿಷ್ಕರಣೆ ಬಳಿಕ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಸಹಾಯಕ ಮತದಾರರ ನೋಂದಣಾಧಿಕಾರಿ ಕಚೇರಿಗಳು ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ನಡೆಸಿ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ

ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಕುರಿತಂತೆ ಮಾಹಿತಿ ನೀಡಿದ್ದಾರೆ. ಕ್ಷೇತ್ರದಲ್ಲಿ, ಒಟ್ಟು ೧ ಲಕ್ಷದ ೧೪ ಸಾವಿರದ ೧೬೫ ಪುರುಷ, ೧ ಲಕ್ಷದ ೧೮ ಸಾವಿರ ೩೫೫ ಮಹಿಳೆಯರು ಹಾಗೂ ೪೪ ತೃತೀಯಲಿಂಗಿ ಮತದಾರರು ಸೇರಿದಂತೆ ಒಟ್ಟು ೨ ಲಕ್ಷದ ೩೨ ಸಾವಿರದ ೫೬೪ ಮತದಾರರಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಲಖನೌದ ಏಕಾನ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟೂರ್ನಿಯ ಸೆಮಿಫೈನಲ್ ಪಂದ್ಯದಲ್ಲಿ ಉತ್ತರಾಖಂಡ್ ವಿರುದ್ಧ ದೇವದತ್ ಪಡಿಕ್ಕಲ್ ಚೊಚ್ಚಲ ದ್ವಿಶತಕ ಸಿಡಿಸಿದ್ದಾರೆ. ಕರ್ನಾಟಕದ ಪರ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಪಡಿಕ್ಕಲ್ ೨೩೨ ರನ್‌ಗಳ ಅಮೋಘ ಇನಿಂಗ್ಸ್ ಆಡಿದ್ದಾರೆ. ಕೆ.ಎಲ್.ರಾಹುಲ್ ಜೊತೆ ಆರಂಭಿಕ ಆಟಗಾರನಾಗಿ ಕಣಕ್ಕಿಳಿದ ಮಯಾಂಕ್ ಅಗರ್ವಾಲ್ ಕೇವಲ ೫ ರನ್‌ಗಳಿಸಿ ವಿಕೆಟ್ ಒಪ್ಪಿಸಿದ್ದಾರೆ. ಈ ಹಂತದಲ್ಲಿ ಕ್ರೀಸ್‌ಗೆ ಆಗಮಿಸಿದ ಪಡಿಕ್ಕಲ್ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ೨೧೧ ಎಸೆತಗಳಲ್ಲಿ ೫ ಸಿಕ್ಸ್‌ರ್ ಹಾಗೂ ೪ ಬೌಂಡರಿಗಳೊಂದಿಗೆ ೧೪೧ ರನ್ ಗಳಿಸಿ ಕೆ.ಎಲ್.ರಾಹುಲ್ ಔಟಾದರು. ಇತ್ತೀಚಿನ ವರದಿ ಬಂದಾಗ ಕರ್ನಾಟಕ ೬ ವಿಕೆಟ್ ನಷ್ಟಕ್ಕೆ ೬೨೧ ರನ್ ಗಳಿಸಿ ಆಡುತ್ತಿದೆ.

<><><><>

ಬೆಂಗಳೂರಿನ ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ಆದೇಶದ ಮೇರೆಗೆ ೬ ವಿಧಾನಸಭಾ ಕ್ಷೇತ್ರಗಳ ರಸ್ತೆಗಳಲ್ಲಿ, ಉದ್ಯಾನವನಗಳಲ್ಲಿ ಹಾಗೂ ಕೆರೆಗಳಲ್ಲಿ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಒಣಗಿದ ಹಾಗೂ ಅಪಾಯಕಾರಿ ಮರಗಳ ರೆಂಬೆ-ಕೊಂಬೆಗಳ ತೆರವು ಕಾರ್ಯಾಚರಣೆಯನ್ನು ಕೈಗೊಳ್ಳಲಾಗಿದೆ. ಒಣಗಿದ ಹಾಗೂ ಅಪಾಯಕಾರಿ ಮರಗಳು ಹಾಗೂ ರೆಂಬೆ ಕೊಂಬೆಗಳಿಂದ ಸಂಭವಿಸಬಹುದಾದ ಅಪಘಾತಗಳನ್ನು ತಡೆಯುವ ಹಾಗೂ ಸಾರ್ವಜನಿಕರ ಜೀವ, ಆಸ್ತಿ-ಪಾಸ್ತಿ ಸುರಕ್ಷತೆಯನ್ನು ಕಾಪಾಡುವ ಉದ್ದೇಶದಿಂದ ಈ ಕಾರ್ಯಾಚರಣೆಗಳನ್ನು ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಪರಿಶೀಲನೆ ಹಾಗೂ ಅಗತ್ಯ ಕ್ರಮಗಳು ನಿರಂತರವಾಗಿ ನಡೆಯಲಿದೆ ಎಂದು ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>